ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1810 (2121)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು

ವಿಷಯ : ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಅನುದಾನ ಬಿಡುಗಡೆ ಬಗ್ಗೆ

(ಅ) 2019-2020ನೇ ಸಾಲಿನಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಡಿ ಹಾಸನ ಜಿಲ್ಲೆಗೆ ಬಿಡುಗಡೆಯಾಗಬೇಕಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಬಾಕಿ ಉಳಿದ ಅನುದಾನವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು ; (ಮಾಹಿತಿ ನೀಡುವುದು)

(ಆ) 2019-2020ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಬಿಡುಗಡೆ ಮಾಡಲು ವಿಳಂಬ ಮಾಡುತ್ತಿರುವುದರಿಂದ ಸ್ಥಳೀಯ ಅಭಿವೃದ್ಧಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳಲಾಗಿದೆಯೇ? (ಮಾಹಿತಿ ನೀಡುವುದು)